ಸಹಮತಿಯನ್ನು ನೀಡಬೇಕೆಂದು ಈ ಮೂಲಕ ಕೋರುತ್ತೇನೆ''

16. ಶಾಸನ ರಚನ ಕಾರ್ಯಕಲಾಪಗಳು

ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ, 1998.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಸನ್ಮಾನ್ಯ ಸಭಾಧ್ಯಕ್ಷರೇ, ''ಕರ್ನಾಟಕ ವಿಧಾನ ಮಂಡಲದವರ ವೇತನಗಳು, ವೇತನಗಳು, ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ, 1998-ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, ''ವಿಧಾನಪರಿಷತ್‌ನಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ, 1998-ನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಉಪಾಧ್ಯಕ್ಷರು: ''ಖಂಡ 2 ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, ''ಮೊದಲನೇ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೇ, ''1998ರ ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.''

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, ''ವಿಧಾನ ಪರಿಷತ್ತಿನಿಂದ ಅಂಗೀಕೃತವಾದ 1998ರ ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿದಂತೆ ಅಂಗೀಕರಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ವಿಷಯ: ವಿಧೇಯಕಗಳನ್ನು ಚರ್ಚಿಸುವ ಬಗ್ಗೆ

+ ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಸಭಾಧ್ಯಕ್ಷರೇ, ನಾನು ಕಾನೂನು ಸಚಿವರು ಮತ್ತು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ಈ ವಿಚಾರವನ್ನು ತರುತ್ತಿದ್ದೇನೆ. ನಮ್ಮ ಮುಂದೆ ಈಗ ಕನಿಷ್ಟ 15 ವಿಧೇಯಕಗಳಿವೆ. ಇಲ್ಲಿ ನಾವು ಹೀಗೆ ಮಾಡಿದರೆ ಅದು ಒಂದು ತರಹ ನಾಟಕೀಯವಾಗಿ ಆದಂತಾಗುತ್ತದೆ. ಅದು ಆಗಬಾರದು. ನಾವು ಶಾಸನ ಸಭೆಯಲ್ಲಿ ಶಾಸನಗಳನ್ನು ರಚನೆ ಮಾಡುವ ಕೆಲಸವನ್ನು ಮಾಡುತ್ತೇವೆ. ಇದನ್ನು ಸೂಕ್ತ ಚರ್ಚೆಯ ಮುಖಾಂತರ ಮಾಡಿ ಮಾಡಬೇಕಾಗುತ್ತದೆ. ಅದನ್ನು ಬಿಟ್ಟು ಇಷ್ಟು ಮಸೂದೆಗಳನ್ನು ಒಂದೇ ದಿನದಲ್ಲಿ ಅದೂ ಒಂದು ಘಂಟೆಯಲ್ಲಿಯೇ ಮಾಡಿ ಮುಗಿಸುತ್ತೇವೆ ಅಂದರೆ, ನನಗೆ ನಾಚಿಕೆಯಾಗುತ್ತದೆ. ಹೀಗೆ ಮಾಡಿದರೆ ಇದು ಅತ್ಯಂತ ಅಪಾಯಕಾರಿ ಬೆಳವಣಿಗೆಯಾಗುತ್ತದೆ. ಈ ಮೂಲಕ ಕೆಟ್ಟ ಸಂಪ್ರದಾಯವನ್ನು ನಾವು ಹಾಕುತ್ತಿದ್ದೇವೆ. ನಾವು ಈ ತರಹ ಶಾಸನಗಳನ್ನು ಮಾಡಿದರೆ ಇದಕ್ಕೆ ಬೆಲೆ ಬರುತ್ತದೆಯೇ? ಹೀಗೆ ಒಂದು ಕಂತೆಯಷ್ಟು ಶಾಸನಗಳನ್ನು ಕೊಟ್ಟು ಅದನ್ನು ಒಂದು ದಿನದ ಒಂದು ಘಂಟೆಯಲ್ಲಿ ಶಾಸನ ಮಾಡುವುದಾದರೆ ಅದು ಈ ಸದನಕ್ಕೆ ಅಗೌರವ ಮಾಡಿದಂತಾಗುತ್ತದೆ. ಸದನದ ಗಾಂಭೀರ್ಯತೆಯು ಹೋಗುತ್ತದೆ. ಮಾನ್ಯ ಮುಖ್ಯಮಂತ್ರಿಯವರು ತಾವುಗಳು ಈ ಬಗ್ಗೆ ಹೇಳಬೇಕೆಂದು ಕೇಳಿಕೊಳ್ಳುತ್ತೇನೆ.